## ವಿದ್ಯಾರ್ಥಿ/ ಪೋಷಕರಿಗೆ ಸೂಚನೆಗಳು

- ಕರ್ನಾಟಕ ಸರ್ಕಾರದ ಮಾನ್ಯತೆ ಪಡೆದ ಶಾಲೆಗಳಲ್ಲಿ, 1 ರಿಂದ 10 ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ (www.sw.kar.nic.in) ಮುಖಾಂತರ ಆನ್-ಲೈನ್ ಅರ್ಜಿ ಸಲ್ಲಿಸಬಹುದಾಗಿದೆ.
- 1 ರಿಂದ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಯು ಸರ್ಕಾರದ ಯಾವುದಾದರೂ ವಸತಿ ನಿಲಯ (ಹಾಸ್ಟೆಲ್)ದಲ್ಲಿ ದಾಖಲಾಗಿದ್ದಲ್ಲಿ, ಅಂತಹ ವಿದ್ಯಾರ್ಥಿಯು ವಿದ್ಯಾರ್ಥಿ ವೇತನ ಪಡೆಯಲು ಅರ್ಹನಿರುವುದಿಲ್ಲ. **ಆದರೆ 9 ಮತ್ತು 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಸರ್ಕಾರಿ ವಸತಿ ನಿಲಯದಲ್ಲಿ ವಾಸವಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಅವಕಾಶವಿರುತ್ತದೆ**.
- ವಿದ್ಯಾರ್ಥಿಗಳಿಗೆ ಆನ್‌ಲೈನ್ ಅರ್ಜಿ ಸೌಲಭ್ಯವನ್ನು ಒದಗಿಸಿರುವುದರಿಂದ, ಬೇರಾವುದೇ ಸ್ವರೂಪದ ಅರ್ಜಿಯನ್ನು ಇಲಾಖೆಯ ಪರಿಗಣಿಸುವುದಿಲ್ಲ.
- ವಿದ್ಯಾರ್ಥಿ ವೇತನವನ್ನು ಜಮೆ ಮಾಡಲು ವಿದ್ಯಾರ್ಥಿಯ ಹೆಸರಿನಲ್ಲಿ ಕಡ್ಡಾಯವಾಗಿ ರಾಷ್ಟ್ರೀಕೃತ/ ಶೆಡ್ಯೂಲ್ಡ್ ಬ್ಯಾಂಕ್‌ನಲ್ಲಿ ಖಾತೆಯನ್ನು ಹೊಂದಿರತಕ್ಕದ್ದು.
- ರಾಜ್ಯ ಸರ್ಕಾರದ ಅನುಮತಿ ಪಡೆದ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ, RTGS/NEFT ಸೇವೆ ಹೊಂದಿರುವ ರಾಷ್ಟ್ರೀಕೃತ/ಶೆಡ್ಯೂಲ್ಡ್ ಬ್ಯಾಂಕುಗಳಲ್ಲಿ ಯಾವುದೇ ಮೊತ್ತ ಪಾವತಿಸದೆ (No Frill Account) ಉಚಿತವಾಗಿ ಖಾತೆ ತೆರೆಯಲು ಅನುಕೂಲ ಮಾಡಿಕೊಡಲು ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ.
- ವಿದ್ಯಾರ್ಥಿಗಳಿಗೆ ಬ್ಯಾಂಕ್ ಖಾತೆ ತೆರೆಯಲು ಬ್ಯಾಂಕುಗಳಿಂದ ತೊಂದರೆಯಾದಲ್ಲಿ, ತಮ್ಮ ಶಾಲೆಯ ಮುಖ್ಯೋಪಾಧ್ಯಾಯರು/ಪ್ರಾಂಶುಪಾಲರಿಗೆ ತಿಳಿಸತಕ್ಕದ್ದು.
- ವಿದ್ಯಾರ್ಥಿಯು ಅರ್ಜಿ ಸಲ್ಲಿಸುವ ಮೊದಲು ತಹಶೀಲ್ದಾರರಿಂದ ಪಡೆದ ಜಾತಿ ಪ್ರಮಾಣ ಪತ್ರ ಮತ್ತು ಆದಾಯ ಪ್ರಮಾಣ ಪತ್ರದ ದೃಢೀಕೃತಗೊಂಡ ಪ್ರತಿಯನ್ನು ಕಡ್ಡಾಯವಾಗಿ ಹೊಂದಿರತಕ್ಕದ್ದು.
- ವಿದ್ಯಾರ್ಥಿಯ ತಂದೆ ಜೀವಂತವಾಗಿದ್ದಲ್ಲಿ, ತಂದೆಯ ಆದಾಯ ಪ್ರಮಾಣ ಪತ್ರ, ತಂದೆ ಜೀವಂತವಾಗಿರದಿದ್ದಲ್ಲಿ ತಾಯಿಯ ಆದಾಯ ಪ್ರಮಾಣ ಪತ್ರ ಅಥವಾ ತಂದೆ-ತಾಯಿ ಇಬ್ಬರು ಜೀವಂತವಾಗಿರದಿದ್ದಲ್ಲಿ ಮಾತ್ರ ಪೋಷಕರ ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
- ನಿಗದಿತ ಕೊನೆಯ ದಿನಾಂಕದೊಳಗಾಗಿ ಆನ್‌ಲೈನ್ ಅರ್ಜಿ ಸಲ್ಲಿಸತಕ್ಕದ್ದು.
- ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿ/ ಪೋಷಕರಿಗೆ ಯಾವುದಾದರೂ ತಾಂತ್ರಿಕ ತೊಂದರೆಯಾದಲ್ಲಿ, ಇಲಾಖೆಯ ಉಚಿತ ದೂರವಾಣಿ ಸಂಖ್ಯೆ: 18004252111ಗೆ ಕರೆ ಮಾಡಿ ಅಥವಾ ತಮ್ಮ ತಾಲ್ಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಭೇಟಿ ನೀಡಿ, ಸಹಾಯವನ್ನು ಪಡೆಯಬಹುದಾಗಿದೆ.
- ವಿದ್ಯಾರ್ಥಿಯು ಆಧಾರ್ ಸಂಖ್ಯೆಯನ್ನು ಹೊಂದಿದ್ದಲ್ಲಿ, ಕಡ್ಡಾಯವಾಗಿ ಆಧಾರ್ ಸಂಖ್ಯೆಯನ್ನು ನಮೂದಿಸಬೇಕು.
- ವಿದ್ಯಾರ್ಥಿಯ ವಿದ್ಯಾರ್ಥಿ ವೇತನವು ಬ್ಯಾಂಕ್ ಖಾತೆಗೆ ಜಮೆಯಾಗಿರುವ ಬಗ್ಗೆ ಅಥವಾ ಅರ್ಜಿಯಲ್ಲಿ ಯಾವುದಾದರೂ ತೊಂದರೆಯಿದ್ದಲ್ಲಿ ವಿದ್ಯಾರ್ಥಿಗೆ ಎಸ್‌ಎಂಎಸ್/ಕರೆ ಮೂಲಕ ಮಾಹಿತಿ ನೀಡಲು, ವಿದ್ಯಾರ್ಥಿಯ ತಂದೆ ಅಥವಾ ತಾಯಿ ಅಥವಾ ಪೋಷಕರ 10 ಅಂಕಿಗಳ ಮೊಬೈಲ್ ದೂರವಾಣಿ ಸಂಖ್ಯೆಯನ್ನು ಒದಗಿಸತಕ್ಕದ್ದು.
- ವಿದ್ಯಾರ್ಥಿಯು ವ್ಯಾಸಂಗ ಮಾಡುತ್ತಿರುವ ಸರಿಯಾದ ಶಾಲೆಯನ್ನು ಆಯ್ಕೆ ಮಾಡತಕ್ಕದ್ದು, ವಿದ್ಯಾರ್ಥಿಯ ಶಾಲೆಯ ವಿವರವು ಇಲ್ಲದಿದ್ದಲ್ಲಿ, ತಮ್ಮ ಶಾಲೆಯ ಮುಖ್ಯೋಪಧ್ಯಾಯರಿಗೆ ತಿಳಿಸತಕ್ಕದ್ದು.
- ತಮ್ಮ ಖಾತೆ ಹೊಂದಿರುವ ಬ್ಯಾಂಕನ್ನು ಆಯ್ಕೆ ಮಾಡುವಾಗ ವಿದ್ಯಾರ್ಥಿಯ ಬ್ಯಾಂಕ್ ಖಾತೆ, ಐ.ಎಫ್.ಎಸ್.ಸಿ. ಕೋಡ್ ಸರಿಯಾಗಿರುವ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು.
- ವಿದ್ಯಾರ್ಥಿಯು 1 ರಿಂದ 10ನೇ ತರಗತಿಯವರೆಗೆ ವ್ಯಾಸಂಗ ಮಾಡುವಾಗ, ಒಮ್ಮೆ ಮಾತ್ರ ಆನ್‌ಲೈನ್ ಅರ್ಜಿ ಸಲ್ಲಿಸಬೇಕು.
- ವಿದ್ಯಾರ್ಥಿಯು ಅರ್ಜಿ ಸಲ್ಲಿಸಿದ ನಂತರ ಬರುವ ಸ್ವೀಕೃತಿ (Acknowledgement)ಯನ್ನು ದ್ವಿ ಪ್ರತಿಯಲ್ಲಿ ಪಡೆದು ಶಾಲೆಯ ಮುಖ್ಯೋಪಾಧ್ಯಾಯರಿಗೆ ಒಂದು ಪ್ರತಿಯನ್ನು ಸಲ್ಲಿಸಿ, ಮತ್ತೊಂದು ಪ್ರತಿಯನ್ನು ತಮ್ಮ ಬಳಿ ಇಟ್ಟುಕೊಳ್ಳತಕ್ಕದ್ದು.
- ಶಾಲೆಯ ಮುಖ್ಯೋಪಾಧ್ಯಾಯರಿಗೆ ಸ್ವೀಕೃತಿ ಪತ್ರವನ್ನು ಸಲ್ಲಿಸುವಾಗ, ಸ್ವೀಕೃತಿ ಪತ್ರದೊಂದಿಗೆ, ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ ಹಾಗೂ ಬ್ಯಾಂಕು ಪಾಸ್ ಬುಕ್‌ನ ಬ್ಯಾಂಕ್ ಖಾತೆಯ ಸಂಖ್ಯೆ ಹಾಗೂ ಖಾತೆದಾರರ ಫೋಟೋವನ್ನೊಳಗೊಂಡ ಪುಟದ ಜೆರಾಕ್ಸ್ ಪ್ರತಿಯನ್ನು ಸಲ್ಲಿಸತಕ್ಕದ್ದು.